**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಶಿಗ್ಗಾಂವಿ ಜವಳಿ ಪಾರ್ಕ್ ಅಸೋಸಿಯೇಷನ್ ಗೆ ರೂ.1.00 ಲಕ್ಷ ಷೇರು ಬಂಡವಾಳ ಮೊತ್ತವನ್ನು ಷೇರು ಮೊತ್ತ ಲೆಕ್ಕಶೀರ್ಷಿಕೆಯಲ್ಲಿ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ: ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಬೆಂಗಳೂರು, ಇವರ ಪತ್ರ ಸಂಖ್ಯೆ: ಕೈಜಇ/ ನೂಜ & ಸಿನೀ/ಉನಿ(ಬಂ)/ ಬಜೆಟ್/2023-24, ದಿನಾಂಕ:11.08.2023.

*****

<u>ಪ್ರಸ್ತಾವನೆ:-</u>

2023-24ನೇ ಸಾಲಿನ ಆಯವ್ಯಯದಲ್ಲಿ ಶಿಗ್ಗಾಂವಿ ಟೆಕ್ಸ್ ಟೈಲ್ ಪಾರ್ಕ್ ಗೆ ಈಕ್ವಿಟಿ ಷೇರು/Equity Share to Shiggaon Textile Park ಬಂಡವಾಳ ಹೂಡಿಕೆ(Investment) ಲೆಕ್ಕಶೀರ್ಷಿಕೆ:4860-01-190-0-03-211 ರಡಿ ರೂ.1.00 ಲಕ್ಷಗಳನ್ನು ಹಂಚಿಕೆ ಮಾಡಲಾಗಿರುತ್ತದೆ.

ಮೇಲೆ ಓದಲಾದ ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ ಇವರ ಪತ್ರದಲ್ಲಿ 2023-24ನೇ ಸಾಲಿನ ಆಯವ್ಯಯದಲ್ಲಿ ಶಿಗ್ಗಾಂವಿ ಟೆಕ್ಸ್ ಟೈಲ್ ಪಾರ್ಕ್ ಗೆ ಈಕ್ವಿಟಿ ಷೇರು ಲೆಕ್ಕಶೀರ್ಷಿಕೆ:4860--01-190-0-03-211 ರಡಿ ರೂ.1.00 ಲಕ್ಷಗಳನ್ನು ಹಂಚಿಕೆ ಮಾಡಲಾಗಿರುವ ಈಕ್ವಿಟಿ ಷೇರನ್ನು ಬಿಡುಗಡೆ ಮಾಡಲು ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಆರ್ಥಿಕ ಇಲಾಖೆಯೊಂದಿಗೆ ಸಮಲೋಚಿಸಿ, ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲು ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: CI 19 JAKY 2023, ಬೆಂಗಳೂರು, ದಿನಾಂಕ:30-09-2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2023-24ನೇ ಸಾಲಿನ ಆಯವ್ಯಯದಲ್ಲಿ ಶಿಗ್ಗಾಂವಿ ಟೆಕ್ಸ್‌ಟೈಲ್ ಪಾರ್ಕ್ ಅಸೋಸಿಯೇಷನ್‌ಗೆ ರೂ.1.00 ಲಕ್ಷ (ಒಂದು ಲಕ್ಷ ರೂಪಾಯಿಗಳು ಮಾತ್ರ) ಷೇರು ಬಂಡವಾಳ ಮೊತ್ತವನ್ನು ಲೆಕ್ಕಶೀರ್ಷಿಕೆ: 4860-01-190-0-03 Equity Share to Shiggaon Textile Park-211- Investment ರಡಿ ಬಿಡುಗಡೆ ಮಾಡಲಾಗಿದೆ.

ಈ ಅನುದಾನವನ್ನು ಸಂಬಂಧಪಟ್ಟ ಯೋಜನೆಯ ಲೆಕ್ಕಶೀರ್ಷಿಕೆಯಡಿಯಲ್ಲಿ ಮಾತ್ರ ವೆಚ್ಚ ಭರಿಸತಕ್ಕದ್ದು. ಸದರಿ ಅನುದಾನವನ್ನು ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು ಕೈಮಗ್ಗ ಮತ್ತು ಜವಳಿ ಇಲಾಖೆರವರ ಮೇಲು ರುಜುವಿನೊಂದಿಗೆ ಖಜಾನೆಯಿಂದ ಸಾದಿಲ್ವಾರು ಬಿಲ್ / ಪೇಯಿಸ್ ರಸೀದಿಯ ಮೂಲಕ ಹಣ ಪಡೆಯಲು ಲೆಕ್ಕಾಧಿಕಾರಿ, ಕೈಮಗ್ಗ ಮತ್ತು ಜವಳಿ ಇಲಾಖೆಯವರಿಗೆ ಅಧಿಕಾರ ನೀಡಿದೆ.

ಕ್ರಿಯಾ ಯೋಜನೆಯಲ್ಲಿ ಅನುಮೋದಿಸಿರುವಂತೆ ಹಾಗೂ ಯೋಜನೆಯ ಮಾರ್ಗಸೂಚಿ ಅನುಸಾರ ಕಾರ್ಯಕ್ರಮ ಅನುಷ್ಠಾನಗೊಳಿಸತಕ್ಕದ್ದು.

ಅನುದಾನವನ್ನು ಯಾವ ಉದ್ದೇಶಕ್ಕಾಗಿ ಬಿಡುಗಡೆಗೊಳಿಸಲಾಗಿದೆಯೋ ಅದೇ ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸತಕ್ಕದ್ದು. ವೆಚ್ಚಗಳು ಪುನರಾವರ್ತಿತವಾಗದಂತೆ ಎಚ್ಚರವಹಿಸತಕ್ಕದ್ದು. ಹಣ ಬಳಕೆ ಮಾಡಿದ ಬಗ್ಗೆ ಹಣ ಬಳಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

..3

ಈ ಆದೇಶವನ್ನು ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ:ಆಇ 109 ವೆಚ್ಚ–1/2023, ದಿನಾಂಕ: 01–09–2023 ಹಾಗೂ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್.ಡಿ 07 ಟಿ.ಎಫ್.ಪಿ. 2023, ದಿನಾಂಕ: 31–07–2023 ರನ್ವಯ ಇಲಾಖಾ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಾವಿತ್ರಮ್ಮ.ಕೆ)
ಸರ್ಕಾರದ ಉಪ ಕಾರ್ಯದರ್ಶಿ
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ(ಜವಳಿ)(ಪ್ರ)
30/9/23

ಗೆ,

1. ಮಹಾಲೇಖಪಾಲರು (ಲೆಕ್ಕಪತ್ರ: ಲೆಕ್ಕಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ವನ ವಿಕಾಸ, 1 & 2ನೇ ಮಹಡಿ, 18ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು–560 003.
3. ನಿರ್ದೇಶಕರು/ ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಕೆ.ಆರ್.ವೃತ್ತ, ಬೆಂಗಳೂರು.

ಪ್ರತಿ ಮಾಹಿತಿಗಾಗಿ:

1. ಮಾನ್ಯ ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ(ಎಂ.ಎಸ್.ಎಂ.ಇ. & ಗಣಿ), ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ– ರವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
3. ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರ ಆಪ್ತ ಸಹಾಯಕರು, ವಿಕಾಸ ಸೌಧ, ಬೆಂಗಳೂರು.
4. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ–1), ವಿಧಾನ ಸೌಧ, ಬೆಂಗಳೂರು.
5. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.